ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

13

ಇಲಾಖೆ / ವಿಷಯ : DEPARTMENT / SUBJECT: ______


ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 1-12-202

**ಅಧಿವೇಶನದಲ್ಲಿ ಎನ್‌ಇಪಿಗೆ ಅನುಮೋದನೆ । ಲವ್ ಜಿಹಾದಿ ಮಂಡನೆ ಡೌಟು, ಗೃಹ ಇಲಾಖೆಯಿಂದ ಪ್ರಸ್ತಾವನೆ ಸಲ್ಲಿಕೆಯಾಗಿಲ್ಲ । ಉತ್ತರಪ್ರದೇಶ ಮಾದರಿಯಲ್ಲಿ ಜಾರಿಗೊಳಿಸಲು ಸಜ್ಜಾಗಿದ್ದ ಸರಕಾರ**

# ಎನ್‌ಇಪಿಗೆ ಒಕ್ಕೆ; ಲವ್ ಜಿಹಾದಿ ಕಾಯಿದೆ ಡೌಟ್?

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

1/12/20





ಕೇಂದ್ರ ಸರಕಾರ ಮಹತ್ವಾಕಾಂಕ್ಷೆಯ ಕಾಯಿದೆಯಾಗಿರುವ ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಕಾಯಿದೆಯನ್ನು ಮುಂಬರುವ ಚಳಿಗಾಲದ ಅಧಿವೇಶನದಲ್ಲಿ ಜಾರಿಗೊಳಿಸಲು ಸರಕಾರ ಸಿದ್ಧತೆ ನಡೆಸಿಕೊಂಡಿದೆ. ಆದರೆ ಇದೇ ರೀತಿ ಲವ್ ಜಿಹಾದ್ ಕಾಯಿದೆಯನ್ನು ಜಾರಿಗೊಳಿಸುವ ಉತ್ಸಾಹದಲ್ಲಿದ್ದ ಸರಕಾರ ಇದೀಗ ಹಿಂದೆ ಸರಿದಿದೆ.

ಭಾರಿ ಚರ್ಚೆಗೆ ಗ್ರಾಸವಾಗಿರುವ 'ಲವ್ ಜಿಹಾದ್' ಹೆಸರಿನ ಧಾರ್ಮಿಕ ಮತಾಂತರ ತಡೆಯಲು ರಾಜ್ಯ ಸರಕಾರ ಚಳಿಗಾಲದ ಅಧಿವೇಶನದಲ್ಲಿ ವಿಧೇಯಕ ಮಂಡನೆ ಮಾಡುವುದಾಗಿ ಈ ಹಿಂದೆ ಬಿಜೆಪಿಯ ಹಲವು ನಾಯಕರು ಹೇಳಿದ್ದರು. ಆದರೆ ಉತ್ತರ ಪ್ರದೇಶ ಸರಕಾರ ಜಾರಿಗೆ ತಂದಿದ್ದ ಕಾಯಿದೆಯನ್ನು ಅಲಹಾಬಾದ್ ಹೈಕೋರ್ಟ್ ಪ್ರಶ್ನಿಸಿದ ಬೆನ್ನಲ್ಲೇ, ರಾಜ್ಯ ಗೃಹ ಇಲಾಖೆ ಯಾವುದೇ ಪ್ರಸ್ತಾವನೆಯನ್ನು ಸಂಸದೀಯ ವ್ಯವಹಾರಗಳ ಇಲಾಖೆ ಮುಂದೆ ಸಲ್ಲಿಸಿಲ್ಲ ಎಂದು ತಿಳಿದುಬಂದಿದೆ.

**ಸಿದ್ಧತೆಯನ್ನೇ ಆರಂಭಿಸಿಲ್ಲ:** ಡಿ.7ರಿಂದ ಚಳಿಗಾಲದ ಅಧಿವೇಶನ ಆರಂಭವಾಗುತ್ತಿದ್ದರೂ ಗೃಹ ಇಲಾಖೆ ಲವ್ ಜಿಹಾದ್ ಅಥವಾ ಧಾರ್ಮಿಕ ಮತಾಂತರ ತಡೆಗಟ್ಟುವ ಕಾನೂನು ಜಾರಿಗೆ ಯಾವುದೇ ಸಿದ್ಧತೆಯನ್ನೇ ಆರಂಭಿಸಿಲ್ಲ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆಗೆ ಪ್ರಸ್ತಾವನೆಯನ್ನು ರವಾನಿಸಿಲ್ಲ ಎಂದು ಮೂಲಗಳು ತಿಳಿಸಿವೆ. ಈ ಕಾಯಿದೆಯನ್ನು ಜಾರಿಗೊಳಿಸಬೇಕು ಎನ್ನುವ ಇಚ್ಛೆ ಇದ್ದರೆ ಈ ವೇಳೆಗೆ ಕಾನೂನು ಇಲಾಖೆಗೆ ಪ್ರಸ್ತಾವನೆ ಸಲ್ಲಿಸುತ್ತಿತ್ತು. ಬಳಿಕ ಇದಕ್ಕೆ ಅಗತ್ಯ ಪೂರಕ ಸಿದ್ಧತೆಗಳು, ರಾಜ್ಯದಲ್ಲಿ ದಾಖಲಾದ ಲವ್ ಜಿಹಾದ್ ಪ್ರಕರಣಗಳು, ಕೋರ್ಟ್ ಮೆಟ್ಟಿಲೇರಿದ ಪ್ರಕರಣಗಳನ್ನು ಸಂಗ್ರಹಿಸಿ ಕಾನೂನು ರೂಪಿಸಲು ಪ್ರಸ್ತಾಪವನ್ನು ಕಾನೂನು ಇಲಾಖೆಗೆ ಮಂಡಿಸುತ್ತಿತ್ತು. ಆದರೆ ಇದುವರೆಗೂ ಅಂತಹ ಪ್ರಸ್ತಾವನೆ ಗಳಾಗಲೀ, ಟಿಪ್ಪಣಿಗಳಾಗಲೀ ಕಾನೂನು ಇಲಾಖೆಗೆ ಸಲ್ಲಿಕೆಯಾಗಿಲ್ಲ ಎಂದು ತಿಳಿದುಬಂದಿದೆ.

**ಕಾರ್ಯಕಾರಿಣಿ ಸಭೆಯಲ್ಲಿ ಚರ್ಚೆ:** ಹರಿಯಾಣ ಸರಕಾರ ಈ ಕಾಯಿದೆಯನ್ನು ಜಾರಿಗೊಳಿಸಿದ ಬೆನ್ನಲ್ಲೇ ಉತ್ತರ ಪ್ರದೇಶ ಸರಕಾರ ಮಂಡಿಸಿತ್ತು. ಇದಾಗುತ್ತಿದ್ದಂತೆ, ರಾಜ್ಯದಲ್ಲಿಯೂ ಈ ಕಾಯಿದೆಯನ್ನು ಜಾರಿಗೊಳಿಸಬೇಕು ಎನ್ನುವ ಕೂಗು ಜೋರಾಗಿತ್ತು. ಮಂಗಳೂರಿನಲ್ಲಿ ನಡೆದ ಬಿಜೆಪಿ ಕಾರ್ಯಕಾರಿಣಿ ಸಭೆಯಲ್ಲಿ ಸ್ವತಃ ಮುಖ್ಯಮಂತ್ರಿಗಳೇ ಲವ್ ಜಿಹಾದ್ ಸಂಬಂಧ ಬಿಜೆಪಿಯು ಇತರ ರಾಜ್ಯಗಳು ಜಾರಿಗೆ ತಂದಿರುವಂತೆಯೇ ರಾಜ್ಯದಲ್ಲಿಯೂ ಧಾರ್ಮಿಕ ಮತಾಂತರ ತಡೆಗೆ ಕಾನೂನು ತರುವುದಾಗಿ ಪ್ರಕಟಿಸಿದ್ದರು.

ಇದೇ ವಿಚಾರವಾಗಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ, ರಾಜ್ಯದಲ್ಲಿ ಲವ್ ಜಿಹಾದ್ ತಡೆಗಟ್ಟುವ ನಿಟ್ಟಿನಲ್ಲಿ ಉತ್ತರ ಪ್ರದೇಶದ ಯೋಗಿ ಆದಿತ್ಯನಾಥ್ ಸರಕಾರ ಹಾಗೂ ಹರಿಯಾಣದ ಮನೋಹರ್ ಲಾಲ್ ಖಟ್ಟರ್ ಸರಕಾರದಂತೆ ರಾಜ್ಯದಲ್ಲಿಯೂ ಧಾರ್ಮಿಕ ಮತಾಂತರ ತಡೆಯುವುದು ಅನಿವಾರ್ಯವಾಗಿದೆ. ಕರಾವಳಿ ಜಿಲ್ಲೆಗಳು, ಮಲೆನಾಡಿನ ಜಿಲ್ಲೆಗಳಲ್ಲದೆ ಬೆಂಗಳೂರಿನಲ್ಲಿಯೂ ಇಂತಹ ಪ್ರಯತ್ನಗಳು ನಡೆದಿವೆ. ಹೀಗಾಗಿ ಮುಂಬರುವ ಅಧಿವೇಶನದಲ್ಲಿ ಪ್ರೀತಿ, ಪ್ರೇಮದ ಹೆಸರಿನಲ್ಲಿ ನಡೆಯುವ ಧಾರ್ಮಿಕ ಮತಾಂತರ ತಡೆಯಲು ಕಾನೂನು ತರುವುದು ಅನಿವಾರ್ಯ ಎಂದಿದ್ದರು. ಆದರೆ ಅಲಹಾಬಾದ್ ಹೈಕೋರ್ಟ್ ಈ ಕಾಯಿದೆಗೆ ವ್ಯತಿರಿಕ್ತ ತೀರ್ಪು ನೀಡುತ್ತಿದ್ದಂತೆ, ಕಾದು ನೋಡುವ ತಂತ್ರಕ್ಕೆ ಗೃಹ ಇಲಾಖೆ ನಿರ್ಧರಿಸಿದೆ ಎನ್ನಲಾಗಿದೆ.



ಅಧಿವೇಶನದಲ್ಲಿ ಹೊಸ ಶಿಕ್ಷಣ ನೀತಿಯ ರೂಪುರೇಷೆಗಳ ಕುರಿತು ಚರ್ಚಿಸಿ ಇದರ ಜಾರಿಗೆ ಶಾಸನಾತ್ಮಕ ಕ್ರಮಗಳು ಮತ್ತು ಅನುಷ್ಠಾನಕ್ಕೆ ಅಗತ್ಯವಾದ ಆಯೋಗ ಸೇರಿದಂತೆ ಇತರ ಆಡಳಿತಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗುವುದು.

**- ಸುರೇಶ್‌ಕುಮಾರ್** ಪ್ರಾಥಮಿಕ ಮತ್ತು ಶಿಕ್ಷಣ ಸಚಿವ